**All India Radio: Bangalore**
**National Bulletin In Kannada**
**30.01.2025 19.35 p.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**30.01.2025 19.35 p.m.**
********************

**ಮುಖ್ಯಾಂಶಗಳು**

1. **ಗಿಗ್, ಅರೆಕಾಲಿಕ ಗುತ್ತಿಗೆ ಕಾರ್ಮಿಕರ ಕಲ್ಯಾಣವೇ ಕೇಂದ್ರ ಸರ್ಕಾರದ ಆದ್ಯತೆ**
2. **ಭಾರತ ಶೀಘ್ರ ತನ್ನದೇ ಆದ ಮೂಲಭೂತ ಕೃತಕ ಬುದ್ಧಿಮತ್ತೆ ಮಾದರಿ ನೀತಿ ರೂಪಿಸಲಿದೆ – ಕೇಂದ್ರ ಸಚಿವ ಅಶ್ವಿನಿ ವೈಷ್ಣವ್**
3. **ಸಂಸತ್ತಿನ ಬಜೆಟ್ ಅಧಿವೇಶನ ನಾಳೆಯಿಂದ ಆರಂಭ; ಶನಿವಾರ 2025-26ನೇ ಸಾಲಿನ ಕೇಂದ್ರ ಬಜೆಟ್ ಮಂಡನೆ**
4. **ರಾಷ್ಟ್ರೀಯ ಕ್ರೀಡಾಕೂಟ; ರಸ್ತೆ ಸೈಕಲಿಂಗ್ ಸ್ಪರ್ಧೆಯಲ್ಲಿ ಕರ್ನಾಟಕಕ್ಕೆ ಚಿನ್ನ- ಕಂಚಿನ ಪದಕ**

********************

ಸಂಘಟಿತ ಮತ್ತು ಅಸಂಘಟಿತ ವಲಯದ ಕಾರ್ಮಿಕರಿಗೆ ಅನುಕೂಲವಾಗುವ ಸುಧಾರಣೆಗಳನ್ನು ತರಲು ಕೇಂದ್ರ ಬದ್ಧವಾಗಿದೆ ಎಂದು ಕೇಂದ್ರ ಕಾರ್ಮಿಕ ಸಚಿವ ಮನ್ಸೂಖ್ ಮಾಡವೀಯ ಹೇಳಿದ್ದಾರೆ.

ದೆಹಲಿಯಲ್ಲಿಂದು ನಡೆದ ರಾಜ್ಯಗಳ ಕಾರ್ಮಿಕ ಸಚಿವರು ಮತ್ತು ಕಾರ್ಯದರ್ಶಿಗಳ ಎರಡು ದಿನಗಳ ರಾಷ್ಟ್ರೀಯ ಮಟ್ಟದ ಮುಕ್ತಾಯ ಸಭೆಯಲ್ಲಿ ಈ ವಿಷಯ ತಿಳಿಸಿದರು.

ಕಾರ್ಮಿಕರ ಬದುಕು ಹಸನು ಮಾಡಲು ರಾಜ್ಯ ಸರ್ಕಾರಗಳೊಂದಿಗೆ ಜೊತೆಗೂಡಿ ಕೆಲಸ ಮಾಡಲು ಸಿದ್ಧವಿರುವುದಾಗಿಯೂ ಹೇಳಿದರು.

ಗಿಗ್ ಮತ್ತು ಅರೆಕಾಲಿಕ ಗುತ್ತಿಗೆ ಕಾರ್ಮಿಕರ ಕಲ್ಯಾಣವೇ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದರು. ಇಂದಿನ ಸಭೆಯಲ್ಲಿ ಪಿಂಚಣಿ, ಆರೋಗ್ಯ ರಕ್ಷಣೆ, ಅಪಘಾತ ವಿಮೆ, ಜೀವ ವಿಮೆ ಸೇರಿದಂತೆ 10 ಪ್ರಮುಖ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ಕಾರ್ಮಿಕರಿಗೆ ಸಮಗ್ರ ಸಾಮಾಜಿಕ ಭದ್ರತಾ ವ್ಯಾಪ್ತಿಗಾಗಿ ಸಮಾಲೋಚನೆ ನಡೆಸಲು ಮತ್ತು ಸುಸ್ಥಿರ ಮಾದರಿ ಅಭಿವೃದ್ಧಿಪಡಿಸಲು ಐದು ರಾಜ್ಯಗಳನ್ನು ಒಳಗೊಂಡ ಮೂರು ಸಮಿತಿಗಳನ್ನು ರಚಿಸಲಾಯಿತು ಎಂದು ಸಚಿವರು ಮಾಹಿತಿ ನೀಡಿದರು.

********************

ಮುಂಬರುವ ತಿಂಗಳಲ್ಲಿ ಭಾರತ ತನ್ನದೇ ಆದ ಮೂಲಭೂತ ಕೃತಕ ಬುದ್ಧಿಮತ್ತೆ ಮಾದರಿ ನೀತಿ ರೂಪಿಸಲಿದೆ ಎಂದು ಎಲೆಕ್ಟ್ರಾನಿಕ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಾರತದ ಮೂಲಭೂತ ಮಾದರಿ ವಿಶ್ವದ ಅತ್ಯುತ್ತಮ ಮಾದರಿಗಳೊಂದಿಗೆ ಸ್ಪರ್ಧಿಸಲು ಇದರಿಂದ ಸಹಕಾರಿಯಾಗಲಿದೆ ಎಂದರು.

ಭಾರತ ತನ್ನದೇ ಆದ ಸ್ವಂತ ಕೃತಕ ಬುದ್ಧಿಮತ್ತೆ ಮಾದರಿಯನ್ನು ಅಭಿವೃದ್ಧಿಪಡಿಸಲು ಪ್ರಸ್ತಾವನೆಗಳನ್ನು ಆಹ್ವಾನಿಸಲು ಮುಂದಾಗಿದೆ. ಇದಕ್ಕಾಗಿ ಕೃತಕ ಬುದ್ಧಿಮತ್ತೆ ಸುರಕ್ಷತಾ ಸಂಸ್ಥೆಯನ್ನು ಸ್ಥಾಪಿಸಲಾಗುವುದು. ಈಗಾಗಲೇ ಇದರ ಆರಂಭಿಕ ಗ್ರಾಫಿಕ್ ಪ್ರೊಸೆಸಿಂಗ್ ಯೂನಿಟ್ ಜಿಪಿಯು ಗುರಿಗಳನ್ನು ಮೀರಿದೆ. 18 ಸಾವಿರದ 693 ಜಿಪಿಯುಗಳನ್ನು ಹೊಂದಿರುವ ಸಾಮಾನ್ಯ ಕಂಪ್ಯೂಟಿಂಗ್ ಸೌಲಭ್ಯವನ್ನು ಪ್ರಾರಂಭಿಸಲಾಗಿದ್ದು, ಮುಂಬರುವ ದಿನಗಳಲ್ಲಿ ಇದು ಸಂಶೋಧಕರಿಗೆ ಮತ್ತು ನವೋದ್ಯಮ ಪ್ರಾರಂಭಿಸುವವರಿಗೆ ಲಭ್ಯವಾಗಲಿದೆ ಎಂದು ಕೇಂದ್ರ ಸಚಿವರು ಹೇಳಿದರು.

********************

ಸಂಸತ್ತಿನ ಬಜೆಟ್ ಅಧಿವೇಶನ ನಾಳೆಯಿಂದ ಆರಂಭವಾಗಲಿದೆ. ಈ ಹಿನ್ನೆಲೆಯಲ್ಲಿ ದೆಹಲಿಯಲ್ಲಿಂದು ಸರ್ವಪಕ್ಷಗಳ ಸಭೆ ನಡೆಯಿತು.

ಸಭೆ ಬಳಿಕ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಸುದ್ದಿಗಾರರೊಂದಿಗೆ ಮಾತನಾಡಿ, ಸುಗಮ ಕಲಾಪಕ್ಕಾಗಿ ಎಲ್ಲ ರಾಜಕೀಯ ಪಕ್ಷಗಳ ಸಹಕಾರ ಕೋರಲಾಗಿದೆ. ನಾಳೆ ಸಂಸತ್ತಿನ ಜಂಟಿ ಅಧಿವೇಶನ ಉದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಷಣ ಮಾಡಲಿದ್ದಾರೆ. ತದ ನಂತರ ಹಣಕಾಸು ಸಚಿವ ನಿರ್ಮಲಾ ಸೀತಾರಾಮನ್ ಅವರು, ಆರ್ಥಿಕ ಸಮೀಕ್ಷೆ ಮಂಡಿಸಲಿದ್ದಾರೆ. ಶನಿವಾರ ಕೇಂದ್ರ ಬಜೆಟ್ ಮಂಡನೆಯಾಗಲಿದೆ. 16 ಮಸೂದೆಗಳು ಸದನದಲ್ಲಿ ಚರ್ಚೆಯಾಗುವ ಸಾಧ್ಯತೆ ಇದೆ ಎಂದರು.

**ಧ್ವನಿ: ಕಿರಣ್ ರಿಜಿಜು**

ಸೋಮವಾರ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲೆ  ಲೋಕಸಭೆ ಮತ್ತು ರಾಜ್ಯಸಭೆ ಚರ್ಚೆ ನಡೆಸಲಿದೆ. ನಾಳೆ ಆರಂಭವಾಗುವ ಬಜೆಟ್ ಅಧಿವೇಶನದ ಮೊದಲ ಚರಣ ಫೆಬ್ರವರಿ 13 ರವರೆಗೆ ಮುಂದುವರಿಯುತ್ತದೆ. ಬಜೆಟ್ ಅಧಿವೇಶನದ ಎರಡನೇ ಚರಣ ಮಾರ್ಚ್ 10 ರಿಂದ ಏಪ್ರಿಲ್ 4 ರವರೆಗೆ ನಡೆಯಲಿದೆ.

ಈ ನಡುವೆ, ದೆಹಲಿಯಲ್ಲಿ ವಿಧಾನಸಭಾ ಚುನಾವಣೆ ನಡೆಯುವುದರಿಂದ ಫೆಬ್ರವರಿ 5 ರಂದು ಸಂಸತ್ ಕಲಾಪ ಇರುವುದಿಲ್ಲ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ದೆಹಲಿಯಲ್ಲಿಂದು ಹೇಳಿದ್ದಾರೆ.

****************

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳಕ್ಕೆ ವಿಶೇಷ ಬಸ್‌ಗಳ ಸೇವೆಯನ್ನು ಮುಂದಿನ ತಿಂಗಳ 4ರವರೆಗೆ ರದ್ದುಪಡಿಸಲು ಒಡಿಶಾ ಸರ್ಕಾರ ನಿರ್ಧರಿಸಿದೆ.

ಪ್ರಯಾಗ್‌ರಾಜ್‌ನಲ್ಲಿ ಯಾತ್ರಿಕರ ಸಂಖ್ಯೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯಬಾರದು ಎಂಬ ಮುನ್ನೆಚ್ಚರಿಕೆ ಕ್ರಮವಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ಈ ತಿಂಗಳ 12 ರಿಂದ ಪ್ರಯಾಗ್‌ರಾಜ್‌ಗೆ ವಿಶೇಷ ಬಸ್‌ಗಳ ಸಂಚಾರ ಒದಗಿಸಲಾಗಿತ್ತು.

****************

ಉತ್ತರ ಪ್ರದೇಶದ ಮುಖ್ಯ ಕಾರ್ಯದರ್ಶಿ ಮನೋಜ್ ಕುಮಾರ್ ಸಿಂಗ್ ಮತ್ತು ರಾಜ್ಯ ಮಹಾನಿರ್ದೇಶಕ ಪ್ರಶಾಂತ್ ಕುಮಾರ್ ಇಂದು ಸಂಗಮ್ ಘಾಟ್‌ಗೆ ಭೇಟಿ ನೀಡಿ ಪರಿಶೀಲಿಸಿದರು.

ನಿನ್ನೆ ಉಂಟಾದ ನೂಕುನುಗ್ಗಲು ಮತ್ತು ಕಾಲ್ತುಳಿತದಲ್ಲಿ 30 ಮಂದಿ ಮೃತಪಟ್ಟ ಪ್ರದೇಶವನ್ನು ಪರಿಶೀಲಿಸಿದರು. ನಂತರ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳುಗಳ ಯೋಗಕ್ಷೇಮವನ್ನು ವಿಚಾರಿಸಿದರು.

ಇದೇ ಸಂದರ್ಭದಲ್ಲಿ ಭದ್ರತಾ ವ್ಯವಸ್ಥೆಯನ್ನು ಪರಿಶೀಲಿಸಲಾಯಿತು.

****************

ಗುಜರಾತ್‌ನಲ್ಲಿ ಮೂರು ಹೊಸ ಕ್ರಿಮಿನಲ್ ಕಾನೂನು ಅನುಷ್ಠಾನ ಕುರಿತ ಪರಿಶೀಲನಾ ಸಭೆ ದೆಹಲಿಯಲ್ಲಿಂದು ನಡೆಯಿತು. ಕೇಂದ್ರ ಗೃಹ ಸಚಿವ ಅಮಿತ್ ಶಾ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಗುಜರಾತ್‌ನಲ್ಲಿ ಪೊಲೀಸ್, ಜೈಲು, ನ್ಯಾಯಾಲಯಗಳು, ವಿಧಿ–ವಿಜ್ಞಾನಕ್ಕೆ ಸಂಬಂಧಿಸಿದ ಹೊಸ ನಿಬಂಧನೆ ಮತ್ತು ಪ್ರಸ್ತುತ ಪರಿಸ್ಥಿತಿಯನ್ನು ಸಭೆಯಲ್ಲಿ ಪರಾಮರ್ಶಿಸಲಾಯಿತು. ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಮೊದಲಾದವರು ಹಾಜರಿದ್ದರು.

****************

ಮುಂದಿನ ಐದು ವರ್ಷದಲ್ಲಿ ದೇಶದಲ್ಲಿ ವಾರ್ಷಿಕ 300 ದಶಲಕ್ಷ ಟನ್ ಉಕ್ಕು ಉತ್ಪಾದಿಸುವ ಗುರಿಯನ್ನು ಕೇಂದ್ರ ಸರ್ಕಾರ ಹೊಂದಿದೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ಆಂಧ್ರ ಪ್ರದೇಶದ ವಿಶಾಖಪಟ್ಟಣಂನಲ್ಲಿಂದು ರಾಷ್ಟ್ರೀಯ ಉಕ್ಕು ಕಾರ್ಖಾನೆ– ಆರ್‌ಐಎನ್‌ಎಲ್ ಗೆ ಭೇಟಿ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಆಶಯದಂತೆ ಆಂಧ್ರ ಪ್ರದೇಶದ ರಾಷ್ಟ್ರೀಯ ಉಕ್ಕು ಕಾರ್ಖಾನೆ–ಆರ್‌ಐಎನ್‌ಎಲ್ ಪುನಶ್ಚೇತನಕ್ಕೆ 11 ಸಾವಿರದ 400 ಕೋಟಿ ರೂಪಾಯಿಗಳ ಬೃಹತ್ ಪ್ಯಾಕೇಜ್ ಘೋಷಿಸಲಾಗಿದೆ. ಇದು ಕೇಂದ್ರ ಸರ್ಕಾರ ಕೈಗೊಂಡ ಐತಿಹಾಸಿಕ ನಿರ್ಧಾರವಾಗಿದೆ ಎಂದು ಹೇಳಿದರು.

****************

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ದೆಹಲಿ ವಿಶ್ವವಿದ್ಯಾಲಯದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳೊಂದಿಗೆ ವಿಕಸಿತ ಭಾರತ ಕುರಿತು ಸಂವಾದ ನಡೆಸಿದರು.

ಯುವಜನರಿಲ್ಲದೇ, ಭಾರತದ ಭವಿಷ್ಯವನ್ನು ನೆನಪು ಮಾಡಿಕೊಳ್ಳಲು ಸಾಧ್ಯವಿಲ್ಲ. ಯುವಕರಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ವಿವಿಧ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಲು ಮುಕ್ತ ಅವಕಾಶವನ್ನು ಒದಗಿಸಿಕೊಡಬೇಕಾಗಿದೆ ಎಂದರು.

ವಿದ್ಯಾರ್ಥಿಗಳು ತಮ್ಮ ಕ್ಷೇತ್ರಗಳಲ್ಲಿ ಅತ್ಯುತ್ತಮವಾದದ್ದನ್ನೇ ನೀಡಬೇಕು. ಭವಿಷ್ಯದಲ್ಲಿ ದೇಶ ಹೆಚ್ಚಿನ ಬೆಳವಣಿಗೆ ಸಾಧಿಸಲು ಯುವಜನರು ಹೆಚ್ಚಿನ ಜವಾಬ್ದಾರಿ ನಿರ್ವಹಿಸಬೇಕು ಎಂದು ಕೇಂದ್ರ ಸಚಿವ ಜೈಶಂಕರ್ ಹೇಳಿದರು.

****************

ಭಾರತಾದ್ಯಾಂತ ಡಿಜಿಟಲ್ ಪಾವತಿಗಳು ವರ್ಷದಿಂದ ವರ್ಷಕ್ಕೆ ಶೇಕಡ 11.1 ರಷ್ಟು ಜಿಗಿತವನ್ನು ದಾಖಲಿಸಿದೆ.

ಭಾರತೀಯ ರಿಸರ್ವ್ ಬ್ಯಾಂಕ್ ಸೂಚ್ಯಂಕದ ಪ್ರಕಾರ ಸೆಪ್ಟೆಂಬರ್ 2024ರ ವೇಳೆಗೆ ಈ ಪ್ರಗತಿ ಸಾಧಿಸಲಾಗಿದೆ ಎಂದು ವರದಿಯಾಗಿದೆ. ಮಾರ್ಚ್ 2024ರಲ್ಲಿ ಡಿಜಿಟಲ್ ಪಾವತಿ ಸೂಚ್ಯಂಕ 445 ರಿಂದ 465ಕ್ಕೆ ಏರಿಕೆಯಾಗಿದೆ. ಈ ಅವಧಿಯಲ್ಲಿ ದೇಶಾದ್ಯಂತ ಪಾವತಿ ಮೂಲಸೌಕರ್ಯ ಮತ್ತು ಪಾವತಿ ಕಾರ್ಯಕ್ಷಮತೆಯಲ್ಲಿನ ಬೆಳವಣಿಗೆಯಿಂದ ಸೂಚ್ಯಂಕದಲ್ಲಿ ಈ ಹೆಚ್ಚಳ ಕಂಡು ಬಂದಿದೆ.

****************

ವಿಶ್ವ ಪುಸ್ತಕ ಮೇಳ ಫೆಬ್ರವರಿ 1 ರಂದು  ನವದೆಹಲಿಯ ಭಾರತ್ ಮಂಟಪದಲ್ಲಿ ಪ್ರಾರಂಭವಾಗಲಿದೆ. 'ನಾವು ಭಾರತದ ಜನರು'  ಪುಸ್ತಕ ಮೇಳದ ಈ ವರ್ಷದ  ವಸಂತಗಳನ್ನು ಘೋಷವಾಕ್ಯವಾಗಿದೆ.

ಇದು ಭಾರತ ಗಣರಾಜ್ಯದ 75 ವಸಂತಗಳನ್ನು  ಸ್ಮರಿಸಲಿದೆ.   ರಾಷ್ಟ್ರೀಯ ಪುಸ್ತಕ ಟ್ರಸ್ಟ್ ನಿದೇಶಕ ಯುವರಾಜ್ ಮಲ್ಲಿಕ್ ಆಕಾಶವಾಣಿಯೊಂದಿಗೆ ಮಾತನಾಡಿ,  9 ದಿನ ನಡೆಯಲಿರುವ ಪುಸ್ತಕ ಮೇಳವನ್ನು  ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಲಿದ್ದಾರೆ ಎಂದು ಹೇಳಿದರು.

ಈ ಪುಸ್ತಕ ಮೇಳದಲ್ಲಿ ರಷ್ಯಾ, ಫ್ರಾನ್ಸ್, ಅರ್ಜೇಂಟೀನಾ, ಕೊಲಂಬಿಯಾ, ಅಬುದಾಬಿ, ಕತಾರ್ ಸೇರಿದಂತೆ 50ಕ್ಕೂ ಹೆಚ್ಚು ರಾಷ್ಟ್ರಗಳು ಪಾಲ್ಗೊಳ್ಳಲಿವೆ. 2 ಸಾವಿರ ಪ್ರಕಾಶಕರು ಮತ್ತು ಒಂದು ಸಾವಿರ ಭಾಷಣಕಾರರು ಹಾಗೂ ಸಾವಿರಾರು  ಸಾಹಿತ್ಯ ಪ್ರೇಮಿಗಳು ಮೇಳದಲ್ಲಿ ಭಾಗಿಯಾಗಲಿದ್ದಾರೆ ಎಂದು ಮಲಿಕ್ ಮಾಹಿತಿ ನೀಡಿದರು.

**ಬೈಟ್ :ಯುವರಾಜ್ ಮಲಿಕ್**

****************

ಡೆಹರಾಡೂನ್‌ನಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಕರ್ನಾಟಕದ ನವೀನ್ ಥಾಮಸ್ ಜಾನ್ ರಸ್ತೆ ಸೈಕಲಿಂಗ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಮುಡಿಗೇರಿಸಿಕೊಂಡಿದ್ದಾರೆ.

ಚಿನ್ನದ ಪದಕ ಗಳಿಸಿದ ನಂತರ ತಮ್ಮ ಅನಿಸಿಕೆ ಹಂಚಿಕೊಂಡಿದ್ದು ಹೀಗೆ...

**ಧ್ವನಿ: ನವೀನ್ ಥಾಮಸ್ ಜಾನ್**

ಮೂವತ್ತು ಕಿಲೋಮೀಟರ್ ಮಹಿಳಾ ರೋಡ್ ಸೈಕ್ಲಿಂಗ್ ಕರ್ನಾಟಕದ ಮೇಘನಾ ಗೊಗಾಡ್ ಕಂಚಿನ ಪದಕ ಗಳಿಸಿಕೊಂಡಿದ್ದಾರೆ.

55 ಕೆಜಿ ಪುರುಷರ ವೇಟ್‌ಲಿಫ್ಟಿಂಗ್ ಜರ್ಕ್ ವಿಭಾಗದಲ್ಲಿ 143 ಕೆ.ಜಿ ಬಾರ ಎತ್ತುವ ಮೂಲಕ ಛತ್ತೀಸ್‌ಗಢದ ವಿಜಯ್ ಕುಮಾರ್ ಚಿನ್ನ ಗೆಲ್ಲುವ ಮೂಲಕ ಇತಿಹಾಸ ಸೃಷ್ಟಿಸಿದ್ದಾರೆ.

****************

ಬ್ಯಾಂಕಾಕ್‌ನಲ್ಲಿ ನಡೆಯುತ್ತಿರುವ ಥೈಲ್ಯಾಂಡ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ಪಂದ್ಯದಲ್ಲಿ  ಕಿಡಂಬಿ ಶ್ರೀಕಾಂತ್ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಹಾಂಕಾಂಗ್‌ನ ಜೇಸನ್ ಗುಣವಾನ್ ವಿರುದ್ಧ ಕೇವಲ 42 ನಿಮಿಷಗಳಲ್ಲಿ 21–19, 21–15 ಅಂತರದಲ್ಲಿ ಜಯ ಸಾಧಿಸಿದ್ದಾರೆ.

****************

ಭಾರತ ಮತ್ತು ಇಂಗ್ಲೆಂಡ್ ನಡುವಿನ 4ನೇ ಟಿ–20 ಅಂತಾರಾಷ್ಟ್ರೀಯ ಪಂದ್ಯ ಪುಣೆಯಲ್ಲಿ ನಾಳೆ ನಡೆಯಲಿದೆ.

ಪಂದ್ಯ ಭಾರತೀಯ ಕಾಲಮಾನ ಸಂಜೆ 7ಕ್ಕೆ ಆರಂಭವಾಗಲಿದೆ.

ಮತ್ತೊಂದೆಡೆ 19 ವರ್ಷದೊಳಗಿನವರ ಐಸಿಸಿ ಮಹಿಳಾ ಟಿ–20 ವಿಶ್ವಕಪ್ ಸೆಮಿಫೈನಲ್ ಪಂದ್ಯದಲ್ಲಿ ನಾಳೆ ಭಾರತ–ಇಂಗ್ಲೆಂಡ್ ವಿರುದ್ಧ ಸ್ಪರ್ಧಿಸಲಿದೆ. ಪಂದ್ಯ ಕೌಲಲಾಂಪುರದಲ್ಲಿ ಬೆಳಗ್ಗೆ 10–30 ಕ್ಕೆ ಪ್ರಾರಂಭವಾಗಲಿದೆ.

********ಮುಕ್ತಾಯ********